ಕರ್ನಾಟಕ ಸರ್ಕಾರ
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು – 560 009.

ಸಂಖ್ಯೆ:ಕಪಂರಾಆ/ಅಭಿವೃದ್ಧಿ/ಗ್ರಂಥಾಲಯ/217/2023 ದಿನಾಂಕ:31.07.2023
E-1080443

# ಸುತ್ತೋಲೆ

ವಿಷಯ: ಗ್ರಂಥಾಲಯ ಮೇಲ್ವಿಚಾರಕರ ಬಯೋಮೆಟ್ರಿಕ್ ಹಾಜರಾತಿ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಪಿ.ಆರ್. 62.ಜಿ.ಪಿ.ಎಸ್.2020
ಬೆಂಗಳೂರು, 27.05.2021

****

ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಪಿ.ಆರ್. 62.ಜಿ.ಪಿ.ಎಸ್.2020 ಬೆಂಗಳೂರು, ದಿನಾಂಕ:27.05.2021ರನ್ವಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಗ್ರಂಥಾಲಯ ಮೇಲ್ವಿಚಾರಕರ ಕೆಲಸದ ವೇಳೆಯನ್ನು ಪ್ರತಿದಿನ 6 ಗಂಟೆಗಳಿಗೆ ನಿಗಧಿಪಡಿಸಿ ಗೌರವಧನವನ್ನು ರೂ. 7,000/- ರಿಂದ ರೂ. 12,000/- ಗಳಿಗೆ ಹೆಚ್ಚಿಸಲಾಗಿರುತ್ತದೆ.

ಮುಂದುವರೆದು, ಗ್ರಾಮ ಪಂಚಾಯಿತಿ ಗ್ರಂಥಾಲಯಗಳು ರಾಜ್ಯ ಸರ್ಕಾರದಿಂದ ಸಾರ್ವಜನಿಕ ರಜೆ ಎಂದು ಘೋಷಿಸಲ್ಪಟ್ಟ ರಜಾ ದಿನಗಳು ಮತ್ತು ಪ್ರತಿ ತಿಂಗಳ ಎರಡನೇ ಮಂಗಳವಾರ ಹಾಗೂ ವಾರದ ರಜೆ (ಸೋಮವಾರ) ಹೊರತುಪಡಿಸಿ, ಮಂಗಳವಾರ, ಬುಧವಾರ, ಗುರುವಾರ ಮತ್ತು ಶುಕ್ರವಾರಗಳಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆವರೆಗೆ ಹಾಗೂ ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 5.00 ಗಂಟೆಯ ವರೆಗೆ ಹಾಗೂ ಶನಿವಾರ ಮತ್ತು ಭಾನುವಾರದಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00ಗಂಟೆಯ ವರೆಗೆ ಹಾಗೂ ಮಧ್ಯಾಹ್ನ 2.00 ಗಂಟೆಯಿಂದ ಸಂಜೆ 5.00 ಗಂಟೆಯ ವರೆಗೆ ನಿಗಧಿಪಡಿಸಿ, ಗ್ರಂಥಾಲಯ ಮೇಲ್ವಿಚಾರಕರ ಗೌರವಧನವನ್ನು ಬಯೋಮೆಟ್ರಿಕ್ ಹಾಜರಾತಿ ಆಧಾರದ ಮೇಲೆ ಪಾವತಿಸಲು ತಿಳಿಸಲಾಗಿರುತ್ತದೆ.

ಸದರಿಯವರ ಹಾಜರಾತಿಯನ್ನು ಪಂಚತಂತ್ರ ಮೊಬೈಲ್ ಆಪ್‌ನಲ್ಲಿ ಅವಕಾಶ ನೀಡಲಾಗಿದ್ದು, ಅದರಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯಿತಿ ಗ್ರಂಥಾಲಯದ ಜಿಯೋ ಲೋಕೇಷನ್‌ನ್ನು ಮ್ಯಾಪ್ ಮಾಡಿದ ನಂತರ, ಸಂಬಂಧಿಸಿದ ಗ್ರಂಥಾಲಯ ಮೇಲ್ವಿಚಾರಕರು ತಮ್ಮ ಗ್ರಾಮ ಪಂಚಾಯಿತಿ ಗ್ರಂಥಾಲಯ ಆವರಣದಲ್ಲಿ (ಸುತ್ತಮುತ್ತ 50 ಕಿ.ಮೀ ಒಳಗಡೆ) ಹಾಜರಾತಿಯನ್ನು ನೀಡಬಹುದು.

ಆದ್ದರಿಂದ, ಗ್ರಂಥಾಲಯ ಮೇಲ್ವಿಚಾರಕರು ಪ್ರತಿ ದಿನ ನಾಲ್ಕು ಬಾರಿ ಅಂದರೆ ಬೆಳಿಗ್ಗೆ 9.00 ಗಂಟೆಗೆ (In) ಮತ್ತು ಮಧ್ಯಾಹ್ನ 1.00 ಗಂಟೆಗೆ (Out) ಹಾಗೂ ಮಧ್ಯಾಹ್ನ 3.00 ಗಂಟೆಗೆ( In) ಮತ್ತು ಸಂಜೆ 5.00 ಗಂಟೆಗೆ (Out) ಬಯೋಮೆಟ್ರಿಕ್ ಹಾಜರಾತಿಯನ್ನು ನೀಡುವಂತೆ ನಿಗಧಿಪಡಿಸಿ, ಅದರಂತೆ ಕ್ರಮವಹಿಸಲು ತಿಳಿಸಿದೆ.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

3. ರಾಜ್ಯದ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ(ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ಗ್ರಾಮ ಪಂಚಾಯಿತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ಮಾಹಿತಿ ಕೇಂದ್ರ/ವೆಬ್ಸೈಟ್, ಗ್ರಾಅಪ ಇಲಾಖೆ.
6. ಮಾಹಿತಿ ಕೇಂದ್ರ/ವೆಬ್‌ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
4. ಕಛೇರಿ ಪ್ರತಿ.